# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 524 |
| ಸದಸ್ಯರ ಹೆಸರು | : | ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 16.09.2021 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಭಾಗಕ್ಕೆ ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಘೋಷಿಸಿದ ಹಾಗೂ ಬಿಡುಗಡೆಗೊಳಿಸಲಾದ ಅನುದಾನವೆಷ್ಟು? | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ಘೋಷಿಸಿದ ಹಾಗೂ ಬಿಡುಗಡೆಗೊಳಿಸಲಾದ ಅನುದಾನದ ವಿವರ ಈ ಕೆಳಕಂಡಂತಿದೆ.<br>(ರೂ.ಕೋಟಿಗಳಲ್ಲಿ)<br>ವರ್ಷ / ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನ / ಬಿಡುಗಡೆಗೊಳಿಸಿದ ಅನುದಾನ<br>2018-19 / 1000.00 / 1000.00<br>2019-20 / 1500.00 / 1125.00<br>2020-21 / 1131.86 / 1031.86 |
| ಆ | ಆಯವ್ಯಯದಲ್ಲಿ ಘೋಷಿಸಿದಂತೆ ಪ್ರಸ್ತುತ ಸಾಲಿನಲ್ಲಿ ರೂ.1500.00 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗುವುದೇ | ಪ್ರಸ್ತುತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ರೂ.1492.97 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. ಈ ಪೈಕಿ ರೂ.373.24 ಕೋಟಿಗಳ ಅನುದಾನವನ್ನು ಮಂಡಳಿಗೆ ಬಿಡುಗಡೆ ಮಾಡಲಾಗಿದೆ.<br>ಆರ್ಥಿಕ ಇಲಾಖೆಯ ನಿರ್ದೇಶನದಂತೆ ಆರಂಭಿಕ ಶಿಲ್ಕು ಮತ್ತು ಬಿಡುಗಡೆಯಾದ ಅನುದಾನ ಸೇರಿ ಒಟ್ಟಾರೆ ಲಭ್ಯವಿರುವ ಅನುದಾನದಲ್ಲಿ ಶೇ.75 ರಷ್ಟು ಪ್ರಗತಿ ಸಾಧಿಸಿದಲ್ಲಿ ಮುಂದಿನ ಕಂತುಗಳನ್ನು ಬಿಡುಗಡೆ ಮಾಡಲಾಗುತ್ತದೆ. |
| ಇ | ಅನುದಾನ ಬಿಡುಗಡೆ ವಿಚಾರದಲ್ಲಿ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | -ಇಲ್ಲ-<br>ಮಂಡಳಿಯಲ್ಲಿ ಡಾ. ನಂಜುಂಡಪ್ಪ ವರದಿಯನ್ವಯ ಸಿ.ಡಿ.ಐ. ಸೂಚ್ಯಾಂಕ ಆಧಾರದ ಮೇಲೆ ಅನುದಾನವನ್ನು ಹಂಚಿಕೆ ಮಾಡಲಾಗುತ್ತದೆ. ಅವುಗಳಲ್ಲಿ ಮೈಕ್ರೋ ಅಡಿಯಲ್ಲಿ ತಾಲೂಕಾವಾರು ಹಾಗೂ ಮ್ಯಾಕ್ರೋ ಅಡಿಯಲ್ಲಿ ಜಿಲ್ಲೆವಾರು ಅನುದಾನವನ್ನು ನಿಗದಿಪಡಿಸಲಾಗುತ್ತಿರುವುದರಿಂದ ವಿಧಾನಸಭಾ ಕ್ಷೇತ್ರವಾರು ಅನುದಾನ ಮಂಡಳಿಯಿಂದ ನಿಗದಿಪಡಿಸುವುದಿಲ್ಲ. |

| | | |
|---|---|---|
| ಈ | ಬಂದಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಿ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದೇ? | -ಅನ್ವಯಿಸುವುದಿಲ್ಲ- |

ಸಂಖ್ಯೆ: ಪಿಡಿಎಸ್ 90 ಹೆಚ್‌ಕೆಡಿ 2021

(ಮುನಿರತ್ನ)
ಸಚಿವರು,
ಯೋಜನೆ, ಕಾರ್ಯಕ್ರಮ
ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.